5) ಎಸ್‌ಎಸ್‌ಎಲ್‌ಸಿ ಪಾಸಾಗಿದ್ದು 5 ವರ್ಷ ಸೇವೆ ಸಲ್ಲಿಸಿದವರಿಗೆ - 425 : ರೂ.

6)ಎಸ್‌ಎಸ್‌ಎಲ್‌ಸಿ ಪಾಸಾಗಿದ್ದು 10 ವರ್ಷ ಸೇವೆ ಸಲ್ಲಿಸಿದವರಿಗೆ -450 : ರೂ.

ಇಲ್ಲ

ವಿಷಯ : - ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿರತಕ್ಕ ಪದವೀಧರ ಯುವಕರಿಗೆ ನಿರುದ್ಯೋಗ ಭತ್ಯೆ ನೀಡುವ ಬಗ್ಗೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 149(154)

ಶ್ರೀ ಪಿ.ಸಿ.ಸಿದ್ದನಗೌಡರ್(ಕಲಘಟಗಿ)

ಮಾನ್ಯ ಕಾರ್ಮಿಕ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ;

ಅ) ರಾಜ್ಯದಲ್ಲಿನ ಗ್ರಾಮಾಂತರ ಪ್ರದೇಶಗಳಲ್ಲಿರತಕ್ಕ ನಿರುದ್ಯೋಗಿ ಪದವೀಧರರುಗಳ ಸಂಖ್ಯೆ ಎಷ್ಟು?

ಆ) ಆ ಗ್ರಾಮಾಂತರ ಪ್ರದೇಶಗಳಲ್ಲಿರತಕ್ಕ ನಿರುದ್ಯೋಗಿ ಪದವೀಧರರುಗಳಿಗೆ ನಿರುದ್ಯೋಗಿ ಭತ್ಯೆಯನ್ನು ನೀಡುವ ವಿಷಯ ಸರ್ಕಾರದ ಮುಂದಿದೆಯೇ?

ಶ್ರೀ ಬ್ಲೇಸಿಂಯಸ್ ಎಂ. ಡಿಸೋಜ

(ಕಾರ್ಮಿಕ ಸಚಿವರು)

ರಾಜ್ಯದ ಗ್ರಾಮಾಂತರ ಪ್ರದೇಶಗಳಲ್ಲಿರತಕ್ಕ ನಿರುದ್ಯೋಗಿ ಪದವೀಧರರುಗಳ ಬಗ್ಗೆ ಮಾಹಿತಿ ಲಭ್ಯವಿರುವುದಿಲ್ಲ.

-ಇಲ್ಲ-

ವಿಷಯ : - ಹುಬ್ಬಳ್ಳಿಯಲ್ಲಿ ಅನಿವಾಸಿ ಭಾರತೀಯರ ನೆರವಿನಿಂದ ಸಹಕಾರಿ ನೂಲಿನ ಗಿರಣಿಯನ್ನು ತೆರೆಯುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 150(155)

ಶ್ರೀ ಪಿ.ಸಿ.ಸಿದ್ದನಗೌಡರ್(ಕಲಘಟಗಿ)

ಮಾನ್ಯ ಜವಳಿ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹುಬ್ಬಳ್ಳಿಯಲ್ಲಿ ಸಂಜಯ ಸಹಕಾರಿ ನೂಲಿನ ಗಿರಣಿಯನ್ನು ಸ್ಥಾಪಿಸಲು ಅನಿವಾಸಿ ಭಾರತೀಯರು ಫಂಡಿಂಗ್ ಏಜೆನ್ಸಿಸ್ ಮುಂದೆ ಬಂದಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಮೇಲ್ಕಂಡ ಗಿರಣಿಗೆ ಅನಿವಾಸಿ ಭಾರತೀಯರ ಫಂಡಿಂಗ್ ಏಜೆನ್ಸೀಯಿಂದ ನೆರವನ್ನು ಪಡೆಯಲು ರಾಜ್ಯ ಸರ್ಕಾರ ಗ್ಯಾರಂಟಿ ನೀಡುತ್ತದೆಯೇ?

ಶ್ರೀ ಹೆಚ್.ಕೆ.ಪಾಟೀಲ್

(ಜವಳಿ ರಾಜ್ಯ ಸಚಿವರು)

-ಹೌದು-

ಸರ್ಕಾರವು ಆ ಸಂಸ್ಥೆಯೊಂದಿಗೆ ಚರ್ಚಿಸಿ ತನ್ನ ನಿಲುವನ್ನು ತೆಗೆದುಕೊಳ್ಳುವುದು.